ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ರೋಷ್ಟರ್ ನಿಯಮಾವಳಿಗಳ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

334(477) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾಷಾ ಅಲ್ಪಸಂಖ್ಯಾತ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇರುವ ರೋಷ್ಟರ್ ನಿಯಮಾವಳಿಗಳೇನು; ಹಾಗೂ ರೋಷ್ಟರ್ ಅನ್ವಯವಾಗುತ್ತಿದೆಯೇ;

(ಆ) ಈ ರೋಷ್ಟರ್ ವಿನಾಯಿತಿ ನೀಡುವ ಸಂಬಂಧ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಸರ್ಕಾರಕ್ಕೆ ಸಲಹೆ ಕೇಳಿದೆಯೇ; ಕೇಳಿದ್ದರೆ, ಸರ್ಕಾರದ ನಿಲುವೇನು; ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮಾನದಂಡಗಳೇನು? (ಪ್ರಸ್ತಾವನೆಯ ಸಂಪೂರ್ಣ ವಿವರ ನೀಡುವುದು)